ಶ್ರೀ ಮೆರಾಜುದ್ದೀನ್ ಎನ್. ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ಹೌದು.

ಆ) ರಾಜ್ಯದಲ್ಲಿ ಹಾಲಿ ಇರುವ ಪಶುವೈದ್ಯಕೀಯ ಸಂಸ್ಥೆಗಳ ಸಂಖ್ಯೆ ಸಾಕಷ್ಟು ಇದ್ದು ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ತೆರೆಯಲು ಪ್ರಸ್ತುತ ಅವಶ್ಯಕತೆ ಇಲ್ಲ. ಹಾಗೂ ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ತೆರೆಯುವ ಕಾರ್ಯಕ್ರಮ ಇರುವುದಿಲ್ಲ.

2679 (2303) ಶ್ರೀ ಮೋಹನ್ ಕೃಷ್ಣ ಶೆಟ್ಟಿ (ಕುಮಟ) :– ಮಾನ್ಯ ಭಾರಿ ಮತ್ತು ಮಧ್ಯಮ ಹಾಗೂ ಸಣ್ಣ ಕೈಗಾರಿಕಾ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕುಮಟ ತಾಲ್ಲೂಕಿನ ಮಾದನಗೆರೆ ಹಾಗೂ ಸುತ್ತಮುತ್ತಲಿನ ಸಾವಿರಾರು ಎಕರೆ ಗಜನಿ ಭೂಮಿಯನ್ನು ಕೆ.ಐ.ಎ.ಡಿ.ಬಿ.ಯವರು ಬಹಳ ವರ್ಷಗಳ ಹಿಂದೆ ವಶಪಡಿಸಿಕೊಂಡಿದ್ದು, ಬಡ ರೈತರಿಗೆ ಈವರೆಗೂ ಏಕೆ ಪರಿಹಾರ ನೀಡಿಲ್ಲ;

ಆ) ಶ್ರೀಮಂತ ಸುಶಿಕ್ಷಿತ ರೈತರು ನ್ಯಾಯಾಲಯ ಆದೇಶ ಪಡೆದು ಪರಿಹಾರ ದೊರಕಿಸಿಕೊಂಡು ಬಡ ಅಶಿಕ್ಷಿತ ರೈತರಿಗೆ ಪರಿಹಾರ ದೊರಕದೆ ವಂಚಿತರಾಗುವುದು ಸರ್ಕಾರದ ಗಮನದಲ್ಲಿದೆಯೆ;

ಇ) ಇದ್ದಲ್ಲಿ ಏನು ಕ್ರಮ ಕೈಗೊಳ್ಳಲಾಗಿದೆ;

ಈ) ಪರಿಹಾರವನ್ನು ಯಾವಾಗ ನೀಡಲಾಗುವುದು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಭಾರಿ ಮತ್ತು ಮಧ್ಯಮ ಹಾಗೂ ಸಣ್ಣ ಕೈಗಾರಿಕಾ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ಸಚಿವರು) :

ಅ) ಕುಮಟ ತಾಲ್ಲೂಕಿನ ಮಾದನಗೆರೆ ಹಾಗೂ ಇತರೆ ಗ್ರಾಮಗಳಲ್ಲಿ ಒಟ್ಟು 1819 ಎಕರೆ 06 ಗುಂಟೆ ಜಮೀನನ್ನು 1972–73ನೇ ಸಾಲಿನಲ್ಲಿ ಭೂಸ್ವಾಧೀನಪಡಿಸಿಕೊಳ್ಳಲಾಗಿದ್ದು, ಭೂಸ್ವಾಧೀನ ಪಡಿಸಿಕೊಂಡ ಈ ಜಮೀನಿನ ಎಲ್ಲಾ ಭೂಮಾಲೀಕರಿಗೆ 1973–74ನೇ ಸಾಲಿನಲ್ಲಿ ಪರಿಹಾರ ಹಣವನ್ನು ವಿತರಿಸಲಾಗಿದೆ.

ಆ) ಭೂಸ್ವಾಧೀನಪಡಿಸಿಕೊಂಡ ಜಮೀನಿನ ಬಹಳಷ್ಟು ಭೂಮಾಲೀಕರು ಹೆಚ್ಚುವರಿ ಪರಿಹಾರ ಧನ ಮಂಜೂರಾತಿ ಬಗ್ಗೆ ಭೂಸ್ವಾಧೀನ ಕಾಯ್ದೆಯ ಅಧಿನಿಯಮ 18(1)ರ ಅಡಿಯಲ್ಲಿ ನ್ಯಾಯಾಲಯಕ್ಕೆ ಮನವಿ ಸಲ್ಲಿಸಿದ್ದು, ಇಂತಹ ಪ್ರಕರಣಗಳಲ್ಲಿ ಅವರಿಗೆ ಹೆಚ್ಚುವರಿ ಪರಿಹಾರ ಧನವನ್ನು ಪಾವತಿಸಲು ನ್ಯಾಯಾಲಯದಲ್ಲಿ ಠೇವಣಿ ಮಾಡಲಾಗಿದೆ. ಆದರೆ

ಕೆಲವು ಭೂಮಾಲೀಕರು ಪರಿಹಾರಧನ ಮಂಜೂರಾತಿಗಾಗಿ ಅಧಿನಿಯಮ 18ರ ಅಡಿಯಲ್ಲಿ ನ್ಯಾಯಾಲಯಕ್ಕೆ ರೆಫರೆನ್ಸ್ ಅರ್ಜಿ ಸಲ್ಲಿಸಿರುವುದಿಲ್ಲ. ಇಂತಹ ಪ್ರಕರಣಗಳಲ್ಲಿ ಹೆಚ್ಚುವರಿ ಪರಿಹಾರ ಧನ ಪಾವತಿ ಮಾಡಲು ಕಾನೂನಿನಲ್ಲಿ ಅವಕಾಶ ಇರುವುದಿಲ್ಲ.

ಇ) ಮೇಲೆ ವಿವರಿಸಿದಂತೆ, ಕೆಲವು ಭೂಮಾಲೀಕರು ಹೆಚ್ಚುವರಿ ಪರಿಹಾರ ಮಂಜೂರಾತಿಗಾಗಿ ನಿಗದಿತ ಅವಧಿಯಲ್ಲಿ ಹೆಚ್ಚುವರಿ ಪರಿಹಾರ ಕೋರಿ ಮನವಿ ಸಲ್ಲಿಸಿಲ್ಲವಾದ್ದರಿಂದ ಅವರಿಗೆ ಹೆಚ್ಚುವರಿ ಪರಿಹಾರ ಹಣ ಪಾವತಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

2680 (3425) ಶ್ರೀ ನಾರಾಯಣಸ್ವಾಮಿ ಎ. (ಆನೇಕಲ್) :- ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಸಣ್ಣ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗ ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಸ್ಥಳೀಯರಿಗೆ ಉದ್ಯೋಗ ವಹಿಸಿಕೊಡಲು ಮಹಿಷಿ ವರದಿ ಜಾರಿಗೊಳಿಸಲು ಸರ್ಕಾರ ತೀರ್ಮಾನ ಕೈಗೊಂಡಿರುವುದು ನಿಜವೇ;

ಇ) ಹಾಗಿದ್ದಲ್ಲಿ ಸದರಿ ವರದಿ ಜಾರಿಗೊಳಿಸಲು ಸರ್ಕಾರದ ಕ್ರಮವೇನು?

ಶ್ರೀ ಪಿ.ಜಿ.ಆರ್. ಸಿಂಧ್ಯಾ (ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಯರ್ಕ ಸಚಿವರು) :

ಅ) ಹೊಸದಾಗಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ನಿಗದಿತ ಪ್ರಮಾಣದಲ್ಲಿ ಉದ್ಯೋಗಾವಕಾಶ ನೀಡಲಾಗುತ್ತಿಲ್ಲ ಎಂಬ ಅಂಶದ ಕಡೆಗೆ ಸರ್ಕಾರದ ಗಮನವನ್ನು ಸೆಳೆಯಲಾಗಿದೆ.

ಆ) ಹೌದು.

ಇ) ಡಾ॥ ಸರೋಜಿನಿ ಮಹಿಷಿ ವರದಿಯ ಶಿಫಾರಸ್ಸುಗಳ ಆಧಾರದ ಮೇಲೆ ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ನೀಡುವ ಬಗ್ಗೆ ಹಾಲಿ ಜಾರಿಯಲ್ಲಿರುವ ಕೈಗಾರಿಕಾ ನೀತಿ 2001–06ರಲ್ಲಿ ಈ ಕೆಳಕಂಡ ಷರತ್ತುಗಳನ್ನು ವಿಧಿಸಲಾಗಿದೆ.